ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಲಯ,
ಕನಕಪುರ.

<u>ಸಿ. ಸಿ. ಃ**605/2016**</u>

# <u>ಆಪಾದನೆ</u>

ಕು. ಪಾರ್ವತಿ, ಬಿ.ಎ.ಎಲ್, ಎಲ್.ಎಲ್.ಬಿ. ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ. ಎಫ್. ಸಿ ರವರ ನ್ಯಾಯಾಧೀಶರು,ಕನಕಪುರ , ಆದ ನಾನು ಈ ಕೆಳಗಿನ ಆರೋಪಿತರಾದ

1. ಗಿರೀಶ ಬಿನ್ ಚಿಕ್ಕತಮ್ಮಯ್ಯ
ವಯಸ್ಸು 35 ವರ್ಷಗಳು,
ವಾಸಃ ದೊಡ್ಡಾಲಹಳ್ಳಿ ಗ್ರಾಮ
ಉಯ್ಯಂಬಳ್ಳಿ ಹೋಬಳಿ
ಕನಕಪುರ ತಾಲ್ಲೂಕು
ರಾಮನಗರ ಜಿಲ್ಲೆ.

ಎಂಬ ನಿಮ್ಮಗಳ ಮೇಲೆ ಹೊರೆಸುವ ಆಪಾದನೆ ಏನೆಂದರೆಃ-

ದಿನಾಂಕ.16.08.2015 ರಂದು ಮಧ್ಯಾಹ್ನ ಸುಮಾರು 2ಃ00 ಗಂಟೆ ಸಮಯದಲ್ಲಿ ಸಾತನೂರು ಪೊಲೀಸ್ ಠಾಣಾ ವ್ಯಾಪ್ತಿಯ ಕನಕಪುರ ತಾಲ್ಲೂಕು, ಮಹಿಮನಹಳ್ಳಿ ಗ್ರಾಮದ ಸರ್ವೆ ನಂ.41/3 ರ ಚಾಸಾ-1 ಶಿವಶಂಕರ ರವರ ಜಮೀನಿಗೆ ಆರೋಪಿಯದ ನೀವು ಅಕ್ರಮವಾಗಿ ಪ್ರವೇಶ ಮಾಡಿ ಜಮೀನಿಗೆ ಹಾಕಿದ್ದ ಕಲ್ಲುಕುಚ್ಚಗಳನ್ನು ಕಿತ್ತುಹಾಕಿ ಮುಳ್ಳುತಂತಿಯನ್ನು ನಾಶ ಮಾಡಿ ಸುಮಾರು ರೂ.20,000/-ಗಳಷ್ಟು ನಷ್ಟವನ್ನುಂಟು ಮಾಡಿ ಕೇಳಲು ಬಂದ ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಜಮೀನಿನ ವಿಚಾರಕ್ಕೆ ಬಂದರೆ ಕೊಲೆ ಮಾಡುವುದಾಗಿ ಪ್ರಾಣ ಬೆದರಿಕೆಯನ್ನು ಹಾಕಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 447, 427, 504, 506 ರಂತೆ ದಂಡಿಸಲ್ಪಡುವ ಅಪರಾಧ ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಸದರಿ ಅಪರಾಧಗಳು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರೀ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ಆರೋಪಣೆಯನ್ನು ಈ ದಿನ ದಿನಾಂಕಃ11.11.2024 ರಂದು ಆರೋಪಿತರಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಅವರ ಉತ್ತರಗಳನ್ನು ಯಥಾವತ್ತಾಗಿ ದಾಖಲಿಸಿದೆ)

ಓ. ಹೇ. ಕೇ. ಸರಿ ಇದೆ.

ಮೂರನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಕನಕಪುರ

ನಿಮಗೆ ಓದಿ ಹೇಳಿದ ಆಪಾದನೆ ಅರ್ಥವಾಯಿತಾ?
ಉಃ

ನೀವು ತಪ್ಪು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕಾ?
ಉಃ

ಮೇಲಿನ ಹೇಳಿಕೆಯನ್ನು ಆಪಾದಿತರಿಗೆ ಓದಿ, ಹೇಳಿ ತಿಳಿಸಿ ಅವರ ಹೇಳಿಕೆ ಪಡೆದುದಾಗಿ ದೃಡಿಕರಿಸುತ್ತೇನೆ.

ಮೂರನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಕನಕಪುರ